Akashvani : Bangalore
National Bulletins In Kannada
02.08.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು :

1. ವಾರಾಣಸಿಯಲ್ಲಿಂದು ಪಿಎಂ-ಕಿಸಾನ್ ಯೋಜನೆಯ ೨೦ನೇ ಕಂತು ಬಿಡುಗಡೆಗೊಳಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ರಾಷ್ಟ್ರೀಯ ಭದ್ರತೆ ಹಾಗೂ ಕಾರ್ಯತಂತ್ರ ಮೌಲ್ಯಮಾಪನ ಆಧಾರದ ಮೇಲೆ ಭಾರತದ ರಕ್ಷಣಾ ಅಗತ್ಯಗಳ ಪೂರೈಕೆ - ವಿದೇಶಾಂಗ ಸಚಿವಾಲಯ
3. ಪ್ರಮುಖ ರೈಲ್ವೆ ನಿಲ್ದಾಣಗಳಲ್ಲಿ ಪ್ರಯಾಣಿಕ ದಟ್ಟಣೆ ನಿರ್ವಹಣೆಗೆ ಪ್ರತ್ಯೇಕ ನಿಲ್ದಾಣ ನಿರ್ದೇಶಕರ ನೇಮಕ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
4. ವಿಶ್ವ ಕುಸ್ತಿ ಪಂದ್ಯಾವಳಿ; ಆರು ಪದಕಗಳೊಂದಿಗೆ ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತದ ಮಹಿಳಾ ತಂಡ
5. ಮಕಾವ್ ಓಪನ್ ಬ್ಯಾಡ್ಮಿಂಟನ್ ಟೂರ್ನಿ; ಸೆಮಿಫೈನಲ್‌ನಲ್ಲಿಂದು ಭಾರತದ ಲಕ್ಷ್ಯ ಸೇನ್ - ತರುಣ್ ಮನ್ನೇಪಲ್ಲಿ ಸ್ಪರ್ಧೆ

**********

ಪ್ರಧಾನಿ ನರೇಂದ್ರ ಮೋದಿ ಇಂದು ವಾರಾಣಸಿಗೆ ಭೇಟಿ ನೀಡುತ್ತಿದ್ದು, ಪ್ರಧಾನಮಂತ್ರಿ ಕಿಸಾನ್ ಯೋಜನೆಯ ೨೦ನೇ ಕಂತಿನ ಹಣ ಬಿಡುಗಡೆ ಮಾಡಲಿದ್ದಾರೆ. ಇದರ ಜತೆಗೆ ಅವರು, ೨ ಸಾವಿರದ ೨೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ೫೨ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ. ಇದೇ ವೇಳೆ ಪ್ರಧಾನಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಪ್ರಧಾನಮಂತ್ರಿ ಕಿಸಾನ್ ಯೋಜನೆಯ ೨೦ನೇ ಕಂತಿನ ಬಿಡುಗಡೆಯ ಮೂಲಕ ಪ್ರಧಾನಿ, ೯ ಕೋಟಿ ೭೦ ಲಕ್ಷ ರೈತರ ಖಾತೆಗಳಿಗೆ ನೇರವಾಗಿ ಒಟ್ಟು ೨೦ ಸಾವಿರದ ೫೦೦ ಕೋಟಿ ರೂಪಾಯಿ ಜಮೆ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಿದ್ದಾರೆ. ಇದರಿಂದ ಪಿಎಂ

ಕಿಸಾನ್ ಯೋಜನೆಯಡಿ ಒಟ್ಟು ಬಿಡುಗಡೆಗೊಳಿಸಿದ ಮೊತ್ತ ೩ ಲಕ್ಷ ೯೦ ಸಾವಿರ ರೂಪಾಯಿ ದಾಟಲಿದೆ. ವಾರಾಣಾಸಿಯ ರಸ್ತೆ ಸಂಪರ್ಕ ಸುಧಾರಣೆಯ ಕ್ರಮವಾಗಿ ಪ್ರಧಾನಿಯವರು ವಿವಿಧ ರಸ್ತೆ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ. ಇದರ ಜೊತೆಗೆ ಮೂಲಸೌಕರ್ಯ ಅಭಿವೃದ್ಧಿಯ ಭಾಗವಾಗಿ ಸ್ಮಾರ್ಟ್ ವಿತರಣಾ ಯೋಜನೆಯಡಿ ವಿವಿಧ ಕಾಮಗಾರಿಗಳಿಗೆ ಹಾಗೂ ೮೮೦ ಕೋಟಿ ರೂಪಾಯಿ ಮೊತ್ತದ ವಿದ್ಯುತ್ ಮೂಲಸೌಕರ್ಯ ಕುರಿತ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದೇ ವೇಳೆ ಪ್ರಧಾನಿಯವರ ಜಲಜೀವನ್ ಮಿಷನ್ ಅಡಿ ೪೨ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ ಹಾಗೂ ನಗರ ವ್ಯಾಪ್ತಿಯ ೫೩ ಶಾಲಾ ಕಟ್ಟಡಗಳ ಅಭಿವೃದ್ಧಿ ಕಾಮಗಾರಿಗೆ ಹಸಿರು ನಿಶಾನೆ ತೋರಲಿದ್ದಾರೆ.

**********

ಭಾರತದ ರಕ್ಷಣಾ ಅಗತ್ಯಗಳ ಸರಬರಾಜು ಸಂಪೂರ್ಣವಾಗಿ ರಾಷ್ಟ್ರೀಯ ಭದ್ರತಾ ಅವಶ್ಯಕತೆಗಳು ಮತ್ತು ಕಾರ್ಯತಂತ್ರ ಮೌಲ್ಯಮಾಪನದ ಮೂಲಕ ನಿರ್ಧರಿಸಲಾಗುತ್ತದೆ ಎಂದು ವಿದೇಶಾಂಗ ಸಚಿವಾಲಯ ಸ್ಪಷ್ಟಪಡಿಸಿದೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ ಜಾಗತಿಕ ಪರಿಸ್ಥಿತಿಗಳು ಮತ್ತು ಮಾರುಕಟ್ಟೆಯಲ್ಲಿ ಲಭ್ಯವಿರುವ ಆಯ್ಕೆಗಳನ್ನು ಆಧರಿಸಿ ಇಂಧನ ಖರೀದಿ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದರು. ಭಾರತ - ರಷ್ಯಾ ಸಂಬಂಧಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ಪ್ರತಿ ರಾಷ್ಟ್ರದೊಂದಿಗಿನ ದ್ವಿಪಕ್ಷೀಯ ಸಂಬಂಧ ಅದರದೇ ಆದ ನೆಲೆಯ ಮೇಲೆ ನಿಂತಿರುತ್ತದೆ. ಅವುಗಳನ್ನು ಮೂರನೇ ದೇಶದ ದೃಷ್ಟಿಕೋನದಡಿ ನೋಡಬಾರದು. ಭಾರತ ಹಾಗೂ ರಷ್ಯಾ ನಡುವಿನ ಸಂಬಂಧಗಳು ಸ್ಥಿರವಾಗಿವೆ ಎಂದು ತಿಳಿಸಿದ್ದಾರೆ.

****ಧ್ವನಿ*** ರಣಧೀರ್ ಜೈಸ್ವಾಲ್

ಭಾರತ - ಅಮೆರಿಕ ರಕ್ಷಣಾ ಸಹಕಾರ ಕುರಿತು ಮಾತನಾಡುತ್ತಾ, ಇತ್ತೀಚಿನ ವರ್ಷಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ಸಹಕಾರ ಬಲಗೊಳ್ಳುತ್ತಾ ಸಾಗಿದ್ದು, ಭಾರತ - ಅಮೆರಿಕ ಸಮಗ್ರ ಕಾರ್ಯತಂತ್ರದ ಒಪ್ಪಂದ - ಕಾಂಪ್ಯಾಕ್ಟ್ ಮೂಲಕ ಉಭಯ ರಾಷ್ಟ್ರಗಳ ಪಾಲುದಾರಿಕೆ ಮತ್ತಷ್ಟು ಬೆಳೆಯುತ್ತಿದೆ ಎಂದು ಹೇಳಿದರು. ನಿಮಿಷ ಪ್ರಿಯಾ ಪ್ರಕರಣ ಕುರಿತು ಮಾತನಾಡಿದ ಅವರು, ಇದು

ಯಮೆನ್‌ನಲ್ಲಿ ನಿಮಿಷ ಪ್ರಿಯಾ ಅವರ ವಿರುದ್ಧ ವಿಧಿಸಲಾಗಿರುವ ಶಿಕ್ಷೆಯನ್ನು ಮುಂದೂಡಲಾಗಿದ್ದು, ಸರ್ಕಾರ ಎಲ್ಲಾ ರೀತಿಯ ನೆರವನ್ನು ನೀಡುತ್ತಿದೆ, ಈ ಪ್ರಕರಣವನ್ನು ಗಂಭೀರವಾಗಿ ಗಮನಿಸಲಾಗುತ್ತಿದ್ದು, ಕೆಲವು ಮಿತ್ರ ರಾಷ್ಟ್ರಗಳೊಂದಿಗೆ ಸಂಪರ್ಕ ಸಾಧಿಸಲಾಗಿದೆ. ಆದರೆ ಅವರ ಬಿಡುಗಡೆ ಕುರಿತ ವರದಿಗಳು ತಪ್ಪಾಗಿವೆ. ಇದು ಸಂವೇದನಾಶೀಲ ವಿಷಯವಾಗಿದ್ದು, ಎಲ್ಲರು ತಪ್ಪು ಮಾಹಿತಿಯನ್ನು ಹರಡದಿರುವಂತೆ ಕೋರಲಾಗಿದೆ ಎಂದು ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದರು.

**********

ಹಬ್ಬಗಳ ಋತುವಿನಲ್ಲಿ ದೇಶದ ರೈಲ್ವೆ ನಿಲ್ದಾಣಗಳಲ್ಲಿ ಉಂಟಾಗುವ ಪ್ರಯಾಣಿಕ ದಟ್ಟಣೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ದೇಶದ ೭೩ ಪ್ರಮುಖ ರೈಲ್ವೆ ನಿಲ್ದಾಣಗಳಲ್ಲಿ ತ್ವರಿತ ನಿರ್ಣಯ ಕೈಗೊಳ್ಳುವ ತಲಾ ಒಬ್ಬ ನಿಲ್ದಾಣ ನಿರ್ದೇಶಕರನ್ನು ನೇಮಿಸಲಾಗುವುದು ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಈ ಕುರಿತು ನಿನ್ನೆ ರಾಜ್ಯಸಭೆಗೆ ಮಾಹಿತಿ ನೀಡಿದ ಅವರು, ಈ ಕ್ರಮದಿಂದಾಗಿ ಅಧಿಕಾರಿಗಳಿಗೆ ಸ್ಥಳದಲ್ಲೇ ದಟ್ಟಣೆ ನಿವಾರಣಾ ನಿರ್ಧಾರಗಳನ್ನು ತೆಗೆದುಕೊಳ್ಳುವ ಅಧಿಕಾರವಿರುತ್ತದೆ. ಇದೇ ನಿಟ್ಟಿನಲ್ಲಿ ರೈಲ್ವೆ ಇಲಾಖೆ ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಪಾದಚಾರಿ ಸೇತುವೆಯ ಅಗಲೀಕರಣ, ನಿಲ್ದಾಣಗಳ ಹೊರ ಭಾಗದಲ್ಲಿ ಶಾಶ್ವತ ನಿರೀಕ್ಷಣಾ ಕೊಠಡಿ, ಸಿಸಿ ಟಿವಿ ಕಣ್ಗಾವಲು, ಘೋಷಣಾ ವ್ಯವಸ್ಥೆಗಳು ಸೇರಿದಂತೆ ವಿವಿಧ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

**********

ಹಿಂದೂ ಮಹಾಸಾಗರ ಪ್ರದೇಶದಲ್ಲಿರುವ ದೇಶಗಳೊಂದಿಗೆ ಭಾರತದ ರಾಜಕೀಯ ಸಂಬಂಧಗಳು ಬಲವಾಗಿದ್ದು, ವ್ಯಾಪಾರ ಹಾಗೂ ಹೂಡಿಕೆ ಸಂಬಂಧಗಳು ವೃದ್ಧಿಯಾಗುತ್ತಿವೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಹೇಳಿದ್ದಾರೆ.

ಲೋಕಸಭೆಯಲ್ಲಿ ನಿನ್ನೆ ಲಿಖಿತ ಉತ್ತರ ನೀಡಿದ ಅವರು, ಈ ಪ್ರದೇಶದ ದೇಶಗಳೊಂದಿಗೆ ಅಭಿವೃದ್ಧಿ ಯೋಜನೆಗಳು ಮತ್ತು ಮೂಲಸೌಕರ್ಯ ಸಹಕಾರ ಮುಂದುವರೆದಿವೆ. ಹಿಂದೂ ಮಹಾಸಾಗರ ಪ್ರದೇಶದಲ್ಲಿ ಭಾರತದ ಭದ್ರತೆ ಮತ್ತು ಆರ್ಥಿಕ ಹಿತಾಸಕ್ತಿಗೆ ಸಂಬಂಧಿಸಿದ ಎಲ್ಲ ಬೆಳವಣಿಗೆಗಳನ್ನು

ಸರ್ಕಾರ ನಿಕಟವಾಗಿ ಗಮನಿಸುತ್ತಿದೆ ಮತ್ತು ಭಾರತದ ಹಿತಾಸಕ್ತಿಗಳನ್ನು ರಕ್ಷಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತದೆ ಎಂದರು.ಈ ಪ್ರದೇಶದ ರಾಷ್ಟ್ರಗಳೊಂದಿಗೆ ಭಾರತದ ಸಂಬಂಧಗಳು ಸ್ವತಂತ್ರವಾಗಿ, ತಮ್ಮದೇ ಆದ ಮೌಲ್ಯಾಧಾರಗಳ ಮೇಲೆ ನಿಂತಿದ್ದು, ಮತ್ತಿತರ ದೇಶಗಳೊಂದಿಗಿನ ಸಂಬಂಧಗಳ ಮೇಲೆ ಅವಲಂಬಿತವಾಗಿಲ್ಲವೆಂದು ಸಚಿವರು ಹೇಳಿದ್ದಾರೆ. ಶ್ರೀಲಂಕಾ, ಮಾಲ್ಡೀವ್ಸ್ ಮತ್ತು ಮಾರಿಷಸ್ ದೇಶಗಳು ಭಾರತದ "ನೆರೆಹೊರೆ ಮೊದಲ ನೀತಿ" ಹಾಗೂ ಮಹಾಸಾಗರ ದೃಷ್ಟಿಕೋಣದಲ್ಲಿ ಪ್ರಮುಖ ಭಾಗವಾಗಿ ಕಾರ್ಯನಿರ್ವಹಿಸುತ್ತವೆ ಎಂದು ಸಚಿವರು ತಿಳಿಸಿದ್ದಾರೆ.

**********

ರಷ್ಯಾ ಮಾಜಿ ಅಧ್ಯಕ್ಷ ಹಾಗೂ ಪ್ರಸ್ತುತ ರಷ್ಯಾದ ಭದ್ರತಾ ಸಮಿತಿ ಮುಖ್ಯಸ್ಥ ಡಿಮಿಟ್ರಿ ಮೆಡ್ವಡೇವ್ ಅವರ ಹೇಳಿಕೆಗೆ ಪ್ರತಿಕ್ರಿಯೆಯಾಗಿ, ಎರಡು ಪರಮಾಣು ಜಲಾಂತರ್ಗಾಮಿ ನೌಕೆಗಳನ್ನು ಸೂಕ್ತ ಪ್ರದೇಶಗಳಲ್ಲಿ ನಿಯೋಜಿಸಲು ಆದೇಶಿಸಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಅಮೆರಿಕ ಮಿಲಿಟರಿ ಮಾರ್ಗಸೂಚಿ ಅನುಸಾರ ಎರಡು ಜಲಾಂತರ್ಗಾಮಿ ನೌಕೆಗಳನ್ನು ನಿಯೋಜಿಸಿರುವ ಸ್ಥಳಗಳ ಕುರಿತು ಅಧ್ಯಕ್ಷ ಟ್ರಂಪ್ ಮಾಹಿತಿ ಬಹಿರಂಗಪಡಿಸಿಲ್ಲ. ಉಕ್ರೇನ್‌ನಲ್ಲಿ ಕದನವಿರಾಮಕ್ಕೆ ಒಪ್ಪಿಕೊಳ್ಳುವಂತೆ ಅಥವಾ ಕಠಿಣ ನಿರ್ಬಂಧಗಳನ್ನು ಎದುರಿಸುವಂತೆ ರಷ್ಯಾಗೆ ಅಧ್ಯಕ್ಷ ಟ್ರಂಪ್ ನೀಡಿದ ಎಚ್ಚರಿಕೆಗಳಿಗೆ ಪ್ರತಿಯಾಗಿ ಮೆಡ್ವಡೇವ್ ಇತ್ತೀಚೆಗೆ ಅಮೆರಿಕಾಗೆ ಬೆದರಿಕೆಯ ರೂಪದಲ್ಲಿ ನೀಡಿದ ಹೇಳಿಕೆಗಳಿಗೆ ಪ್ರತಿಕ್ರಿಯೆಯಾಗಿ ಈ ಕ್ರಮ ಕೈಗೊಳ್ಳಲಾಗಿದೆ.

**********

ಮುಂಬರುವ ಗೋಕುಲಾಷ್ಟಮಿ ಹಬ್ಬದ ಸಂದರ್ಭದಲ್ಲಿ ಉತ್ಸವದಲ್ಲಿ ಪಾಲ್ಗೊಳ್ಳುವ ಒಂದು ಲಕ್ಷದ ೫೦ ಸಾವಿರ ಗೋವಿಂದರಿಗೆ ಮಹಾರಾಷ್ಟ್ರ ಸರ್ಕಾರ ವಿಮಾ ರಕ್ಷಣೆ ಘೋಷಿಸಿದೆ. ಅವರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಭಾಗವಹಿಸುವವರಿಗೆ ಕೇವಲ ೭೫ ರೂಪಾಯಿಗಳ ದರದಲ್ಲಿ ವಿಮಾ ಕಂಪನಿಯೊಂದರ ಮೂಲಕ ವಿಮಾ ವೆಚ್ಚವನ್ನು ಸರ್ಕಾರ ಭರಿಸಲಿದೆ. ಕ್ರೀಡಾಭಿವೃದ್ಧಿ ನಿಧಿಯಿಂದ ಇದಕ್ಕಾಗಿ ಒಂದು ಕೋಟಿ ೧೨ ಲಕ್ಷ ರೂಪಾಯಿ ಮೀಸಲಿಡಲಾಗಿದೆ.

**********

ಗ್ರೀಸ್‌ನ ಅಥೆನ್ಸ್‌ನಲ್ಲಿ ನಡೆದ ೧೭ ವರ್ಷದೊಳಗಿನವರ ವಿಶ್ವ ಕುಸ್ತಿ ಪಂದ್ಯಾವಳಿಯಲ್ಲಿ ಭಾರತೀಯ ಮಹಿಳಾ ಕುಸ್ತಿಪಟುಗಳು ಪ್ರಬಲ ಪ್ರದರ್ಶನ ನೀಡಿದ್ದು, ೨ ಚಿನ್ನ, ೩ ಬೆಳ್ಳಿ ಹಾಗೂ ಒಂದು ಕಂಚಿನ ಪದಕಗಳೊಂದಿಗೆ ಒಟ್ಟು ೬ ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಆ ಮೂಲಕ ಭಾರತೀಯ ಮಹಿಳಾ ಕುಸ್ತಿ ತಂಡ ೧೫೧ ಅಂಕಗಳೊಂದಿಗೆ ಪ್ರಥಮ ಸ್ಥಾನ ಅಲಂಕರಿಸಿ, ಪ್ರಶಸ್ತಿ ತನ್ನದಾಗಿಸಿಕೊಂಡಿದ್ದು, ೧೪೨ ಅಂಕಗಳೊಂದಿಗೆ ಅಮೆರಿಕ ದ್ವಿತೀಯ ಸ್ಥಾನದಲ್ಲಿದೆ.

**********

ಮಕಾವ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಇಂದು ಭಾರತದ ಲಕ್ಷ್ಯ ಸೇನ್ ಹಾಗೂ ತರುಣ್ ಮನ್ನೇಪಲ್ಲಿ ಪುರುಷರ ವಿಭಾಗದ ಪ್ರತ್ಯೇಕ ಸೆಮಿಫೈನಲ್ ಪಂದ್ಯಗಳಲ್ಲಿ ಕಣಕ್ಕಿಳಿಯುತ್ತಿದ್ದಾರೆ. ಲಕ್ಷ್ಯ ಸೇನ್ ಇಂಡೋನೇಷ್ಯಾದ ಅಲ್ವಿ ಫರಾನ್ ವಿರುದ್ಧ ಕಣಕ್ಕಿಳಿಯುತ್ತಿದ್ದರೆ, ತರುಣ್ ಮಲೇಷ್ಯಾದ ಜಸ್ಟಿನ್ ಹೋ ವಿರುದ್ಧ ಸೆಣಸಾಟ ನಡೆಸಲಿದ್ದಾರೆ.

**********

ಲಂಡನ್‌ನ ಓವಲ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಆಂಡರ್‌ಸನ್ ತೆಂಡೂಲ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್ ಸರಣಿಯ ೫ನೇ ಹಾಗೂ ಕೊನೆಯ ಪಂದ್ಯದ ೩ನೇ ದಿನದಾಟದ ಅಂತ್ಯಕ್ಕೆ ನಿನ್ನೆ ಇಂಗ್ಲೆಂಡ್ ವಿರುದ್ಧ ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ಭಾರತ ೨ ವಿಕೆಟ್ ನಷ್ಟಕ್ಕೆ ೭೫ ರನ್ ಗಳಿಸಿದೆ. ಪ್ರಸ್ತುತ ಭಾರತ ೫೨ ರನ್‌ಗಳ ಮುನ್ನಡೆಯಲ್ಲಿದೆ. ಅರ್ಧಶತಕ ಸಾಧಕ ಯಶಸ್ವಿ ಜೈಸ್ವಾಲ್ ಹಾಗೂ ಆಕಾಶ್‌ದೀಪ್ ಕಣದಲ್ಲಿದ್ದು, ಇಂದು ಭಾರತದ ಇನ್ನಿಂಗ್ಸ್‌ಅನ್ನು ಮುಂದುವರಿಸಲಿದ್ದಾರೆ. ಇಂದಿನ ದಿನದಾಟ ಅಪರಾಹ್ನ ೩.೩೦ಕ್ಕೆ ಆರಂಭವಾಗಲಿದೆ.

**********